## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಡಾ: ಬಿ.ಕೃಷ್ಣಾರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕೋಲಾರ ಇವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳನ್ನು ನೇಮಕ ಮಾಡುವ ಬಗ್ಗೆ ಆದೇಶ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 127 ವಿಸೇಬಿ 2010 ದಿ:24.06.2011.
2) ಮಾನ್ಯ ಕೆ.ಎ.ಟಿ. ಅರ್ಜಿ ಸಂಖ್ಯೆ:7062/2011ರ ದಿ:22.08.2016ರ ತೀರ್ಪು.
3) ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಅ.ಟಿ. ಸಂಖ್ಯೆ: ಪಸಂಮಿ 155 ಪಆಸೇ 2016 ದಿನಾಂಕ 19.01.2016.

*******

**ಪ್ರಸ್ತಾವನೆ:-**

ಮೇಲೆ ಓದಲಾದ-(1)ರ ಆದೇಶದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಡಾ: ಬಿ.ಕೃಷ್ಣಾರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕೋಲಾರ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ-8(iii)ರನ್ವಯ 2 ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಹೊಂದದಂತೆ ದಂಡನೆಯನ್ನು ವಿಧಿಸಿ, ಆದೇಶಿಸಿದೆ. ಸದರಿ ಆದೇಶವನ್ನು ಮೇಲೆ ಓದಲಾದ-(2)ರಲ್ಲಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಅರ್ಜಿಯಲ್ಲಿ ಪ್ರಶ್ನಿಸಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ 22.08.2016ರಂದು ಈ ಕೆಳಕಂಡಂತೆ ಆದೇಶಿಸಿರುತ್ತದೆ:-

> "For the foregoing reasons, I am of the considered view, the applicant established, the impugned order has been passed without conducting under Rule-11 of CCA Rules. The impugned order is not sustainable in the eye of Law. Accordingly, the impugned order is quashed. The respondents are at liberty to conduct enquiry as provided under Rule-11 of CCA Rules and pass order in accordance with Rules."

ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯು ನೀಡಿರುವ ತೀರ್ಪಿನನ್ವಯ ಪ್ರಕರಣವನ್ನು ಪುನರ್ ಪರಿಶೀಲಿಸಲಾಗಿ, ಆಪಾದಿತ ಅಧಿಕಾರಿಯು ದಿನಾಂಕ 02.04.2011ರಂದು ದೋಷಾರೋಪಣೆಗೆ ದಿನಾಂಕ 04.05.2011ರಂದು ನೀಡಿರುವ ಲಿಖಿತ ಹೇಳಿಕೆಯನ್ನು ಒಪ್ಪದೆ, ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ-11 ಮತ್ತು 11(ಎ)ರಡಿ ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 168 ವಿಸೇಬಿ 2011 ಬೆಂಗಳೂರು, ದಿನಾಂಕ 30.05.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಡಾ: ಬಿ.ಕೃಷ್ಣಾರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕೋಲಾರ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ (ವ.ನಿ.ಮೇ.) ನಿಯಮ-1957ರ ನಿಯಮ-11ರನುಸಾರ ಇಲಾಖಾ ವಿಚಾರಣೆ ನಡೆಸಲು ಆದೇಶಿಸಿದೆ.

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ (ವ.ನಿ.ಮೇ.) ನಿಯಮ-1957ರ ನಿಯಮ-11ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು ಆದೇ ನಿಯಮಾವಳಿಗಳ ನಿಯಮ-11(2)ರ ಪ್ರಕಾರ ಶ್ರೀ

ಅವಿನ್ ತಿಪ್ಪಣ್ಣ ಹನಮಪ್ಪ, ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ (ವ.ನಿ.ಮೇ.) ನಿಯಮ-1957ರ ನಿಯಮ-11(5)(ಸಿ)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ಕೋಲಾರ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ (ವ.ನಿ.ಮೇ.) ನಿಯಮ-1957ರ ನಿಯಮ-11ರಲ್ಲಿ ನಿಗದಿಪಡಿಸಿರುವ ಕಾರ್ಯ ವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ, ಪ್ರತಿಯೊಬ್ಬ ಆಪಾದಿತ ಅಧಿಕಾರಿಯ ವಿರುದ್ಧದ ಪ್ರತಿಯೊಂದು ಆರೋಪಗಳು ಸಾಬೀತಾಗಿರುವ/ಸಾಬೀತಾಗಿಲ್ಲದಿರುವ ಬಗ್ಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳ ಒಳಗಾಗಿ ಸರ್ಕಾರಕ್ಕೆ ಸಲ್ಲಿಸ ತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳವಾಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 42 ಸೇಇವಿ 2014 ದಿನಾಂಕ 08.01.2015ರನ್ವಯ ವಾಹನ ಭತ್ಯೆಯು ಸೇರಿದಂತೆ ರೂ.15,000/-ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 30/05/2017
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ & ಸಿ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ ವೃತ್ತ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:-5329, ಬೆಂಗಳೂರು-560 001.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3) ಶ್ರೀ ಅವಿನ್ ತಿಪ್ಪಣ್ಣ ಹನಮಪ್ಪ, ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು, ಮನೆ ನಂ.1449, ಬಿ.ಸಿ.ಸಿ.ಹೆಚ್.ಎಸ್. ಲೇಔಟ್, ಬೈಯ್ಯನಪಾಳ್ಯ (ವಾಸರಹಳ್ಳಿ), ತಲಘಟ್ಟಪುರ ಪೋಸ್ಟ್, ಕನಕಪುರ ಮುಖ್ಯ ರಸ್ತೆ, ಬೆಂಗಳೂರು-560 062.
4) ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಕೋಲಾರ (ಮಂಡನಾಧಿಕಾರಿ).
5) ಆಪಾದಿತ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರ ಮುಖಾಂತರ).
6) ಸರ್ಕಾರದ ಉಪ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ (ಪಶುಸಂಗೋಪನೆ), ವಿಕಾಸಸೌಧ, ಬೆಂಗಳೂರು.
7) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.